<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:- ಶ್ರೀ ಜಿ.ಎಂ.ಬಸಣ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಕೂಡ್ಲಿಗಿ (ಪ್ರಸ್ತುತ ಸ್ಥಳ ನಿರೀಕ್ಷಣೆ) ಇವರು ತಮ್ಮ ಮುಂಬಡ್ತಿ ಬಿಟ್ಟುಕೊಟ್ಟಿರುವ ಬಗ್ಗೆ

ಓದಲಾಗಿದೆ:- 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 241 ಪಬವ 2014, ದಿನಾಂಕ:17.03.2015

2. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕೂಡ್ಲಿಗಿ ಇವರ ಪತ್ರ ಸಂಖ್ಯೆ: ತಾಪಂಕೂ/ಸಿಬ್ಬಂದಿ/ಕಾನಿಅ/ಮನವಿ/1/2014-15, ದಿನಾಂಕ: 25.03.2015.

****

**<u>ಪ್ರಸ್ತಾವನೆ:</u>**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ರವರುಗಳಿಗೆ ಉಪಕಾರ್ಯದರ್ಶಿ(ಹಿರಿಯ ಶ್ರೇಣಿ) ಹುದ್ದೆಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ-32 ರನ್ವಯ ಮೇಲೆ (1)ರಲ್ಲಿ ಓದಲಾದ ದಿನಾಂಕ: 17.03.2015ರ ಸರ್ಕಾರದ ಅಧಿಸೂಚನೆಯಲ್ಲಿ ಮುಂಬಡ್ತಿ ನೀಡಲಾಗಿರುತ್ತದೆ. ಸದರಿ ಮುಂಬಡ್ತಿ ಆದೇಶದಲ್ಲಿನ ಕ್ರ.ಸಂ.6 ರಲ್ಲಿನ ಶ್ರೀ ಜಿ.ಎಂ.ಬಸಣ್ಣ, ಇವರು ತಮಗೆ ನೀಡಿದ ಮುಂಬಡ್ತಿಯನ್ನು ಕೆಲವೊಂದು ಕೌಟುಂಬಿಕ ಹಾಗೂ ವೈಯಕ್ತಿಕ ಕಾರಣಗಳ ನಿಮಿತ್ತ ಮುಂಬಡ್ತಿಯನ್ನು ಮುಂದೂಡುವಂತೆ ಉಲ್ಲೇಖ(2)ರ ಪತ್ರದಲ್ಲಿ ಕೋರಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ), 1977ರ ನಿಯಮ-4(ಎ)ರ ಪ್ರಕಾರ ಮುಂಬಡ್ತಿಯು ಬೇಡವೆಂದು ಅಧಿಕಾರಿಯು ತಮ್ಮ ಇಚ್ಛೆಯನ್ನು ವ್ಯಕ್ತಪಡಿಸಿದ್ದಲ್ಲಿ ಅಂತಹ ಅಧಿಕಾರಿಯ ಮುಂಬಡ್ತಿಯನ್ನು ಒಂದು ವರ್ಷದ ಅವಧಿಗೆ ಮುಂದೂಡಲು ಅವಕಾಶವಿರುತ್ತದೆ. ಅಧಿಕಾರಿಯ ಕೋರಿಕೆಯು ಸಕಾರಣಗಳಿಂದ ಕೂಡಿರುವುದರಿಂದ ಇವರ ಕೋರಿಕೆಯನ್ನು ಪರಿಗಣಿಸಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಪಬವ 2016 ಬೆಂಗಳೂರು ದಿನಾಂಕ: 09-06-2015</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 17.03.2015ರ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ ಜಿ.ಎಂ.ಬಸಣ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕೂಡ್ಲಿಗಿ (ಪ್ರಸ್ತುತ ಸ್ಥಳ ನಿರೀಕ್ಷಣೆಯಲ್ಲಿ) ಇವರಿಗೆ ಉಪಕಾರ್ಯದರ್ಶಿ(ಹಿರಿಯ ಶ್ರೇಣಿ) ಹುದ್ದೆಗೆ ನೀಡಿರುವ ಮುಂಬಡ್ತಿಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು-1977ರ ನಿಯಮ4(ಎ)ರ ಪ್ರಕಾರ ಬಿಟ್ಟುಕೊಡಲು (Forego) ಅನುಮತಿ ನೀಡಿದೆ.

1. ಸದರಿ ಅಧಿಕಾರಿಯು ದಿನಾಂಕ: 17.03.2015 ರಿಂದ ಒಂದು ವರ್ಷದ ಅವಧಿಯ ವರೆವಿಗೆ ಅಥವಾ ನಿಕಟಪೂರ್ವದ ದಿನಾಂಕದಲ್ಲಿ ಇತರೆ ಅಧಿಕಾರಿಗಳಿಗೆ ಉಪಕಾರ್ಯದರ್ಶಿ(ಹಿರಿಯ ಶ್ರೇಣಿ) ಹುದ್ದೆಗೆ ಮುಂಬಡ್ತಿಗೆ ಪರಿಗಣಿಸುವವರೆಗೆ ಇವುಗಳಲ್ಲಿ ಯಾವುದು ನಂತರವೋ ಅಲ್ಲಿಯವರೆವಿಗೂ ಮುಂಬಡ್ತಿಗೆ ಅರ್ಹರಾಗಿರುವುದಿಲ್ಲ.

2. ಸದರಿ ಅಧಿಕಾರಿಯು ಈಗಾಗಲೇ ಬಡ್ತಿ ಹೊಂದಿರುವ ಅಧಿಕಾರಿಗಳ ಪಟ್ಟಿಯಲ್ಲಿನ ತಮ್ಮ ಜೇಷ್ಠತೆಯನ್ನು ಕಳೆದುಕೊಳ್ಳುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

9/6/2016

(ಎಸ್.ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಇವರಿಗೆ,</u>**

1. ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ. ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ
3. ಸಂಬಂಧಿಸಿದ ಅಧಿಕಾರಿಗೆ.

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.